ಕಾರ್ಯನಿರ್ವಹಣಾಧಿಕಾರಿಗಳು
ಹಾಗೂ ಕಾರ್ಯದರ್ಶಿಗಳು
ಕರ್ನಾಟಕ ರಾಜ್ಯ ಕಟ್ಟಡ ಮತ್ತು
ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

ಕಲ್ಯಾಣ ಸುರಕ್ಷಾ ಭವನ, ಐಟಿಐ ಕಾಲೇಜು
ಆವರಣ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ:080-29753354, 29653354
kbocwwb@karnataka.gov.in

ಸಂಖ್ಯೆ: KBOCWWB/SEVA-SINDHU/CR-05/2020-21

Date: 15-10-2021.

# ಸುತ್ತೋಲೆ

**ವಿಷಯ:** ಕಟ್ಟಡ ಕಾರ್ಮಿಕರ ನೋಂದಣಿ, ನವೀಕರಣ ಹಾಗೂ ವಿವಿಧ ಸೌಲಭ್ಯಗಳ ಪ್ರಕ್ರಿಯೆಯನ್ನು ಸೇವಾಸಿಂಧು ತಂತ್ರಾಂಶದಲ್ಲಿ ಸ್ಥಗಿತಗೊಳಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಕಾಇ: 383 ಎಲ್ಇಟಿ 2020, ಬೆಂಗಳೂರುದಿನಾಂಕ:12.01.2021.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಣಿ, ನವೀಕರಣ ಹಾಗೂ ವಿವಿಧ ಸೌಲಭ್ಯಗಳು ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಲಾಗುತಿತ್ತು ಹಾಗೂ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ಅಧಿಕಾರಿಗಳು ಸೇವಾ ಸಿಂಧು ತಂತ್ರಾಂಶದ ಮೂಲಕ ಅನುಮೋದನೆ ಮಾಡುತ್ತಿದ್ದರು. ಸರ್ಕಾರದ ಆದೇಶದ ಉಲ್ಲೇಖರನ್ವಯ ಮಂಡಳಿಯ ನೂತನ ತಂತ್ರಾಂಶವನ್ನು ಸಿದ್ಧಪಡಿಸಿದ್ದು, ದಿನಾಂಕ 20-09-2022 ರಂದು ಮಾನ್ಯ ಮುಖ್ಯ ಮಂತ್ರಿಗಳು ನೂತನ ತಂತ್ರಾಂಶಕ್ಕೆ ಚಾಲನೆ ನೀಡಿರುತ್ತಾರೆ.ಆದುದರಿಂದ **ದಿನಾಂಕ 20-10-2022** ರಿಂದ ಸೇವಾಸಿಂಧು ತಂತ್ರಾಂಶದಲ್ಲಿ ಮಂಡಳಿಯ ನೋಂದಣಿ, ನವೀಕರಣ ಹಾಗೂ ವಿವಿಧ ಸೌಲಭ್ಯಗಳ ಕುರಿತು ಅರ್ಜಿಗಳ ಸ್ವೀಕೃತಿಯನ್ನು ಸ್ಥಗಿತಗೊಳಿಸಲಾಗುವುದು ಎಂದು ಈ ಮೂಲಕ ತಿಳಿಸಿದೆ.

ಮುಂದುವರೆದು, ಈಗಾಗಲೇ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತ ಫಲಾನುಭವಿಗಳು **https://kbocwwb.karnataka.gov.in** ರಲ್ಲಿ **Already Registered Construction Workers** ಟ್ಯಾಬ್ ಮೂಲಕ ಮಾಹಿತಿಯನ್ನು ಪೂರ್ಣಗೊಳಿಸಿ ಕಾರ್ಡ್ ಅನ್ನು ಫಲಾನುಭವಿಗಳ ಪ್ರಸ್ತುತ Validity ಗೆ ಪಡೆಯಬಹುದಾಗಿದೆ ಹಾಗೂ ಕಾರ್ಡ್ ಪಡೆದ ಫಲಾನುಭವಿಗಳು ಮಾತ್ರ ಮಂಡಳಿಯ ವಿವಿಧ ಸೌಲಭ್ಯಗಳನ್ನು ಪಡೆಯಲು ಅವಕಾಶವಿರುತ್ತದೆ.

ವಂದನೆಗಳೊಂದಿಗೆ

ತಮ್ಮ ವಿಶ್ವಾಸಿ,

15/10/22

(ಗುರುಪ್ರಸಾದ್ ಎಂ.ಪಿ, ಭಾ.ರಾ.ಸೇ)
ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಹಾಗೂ ಕಾರ್ಯದರ್ಶಿಗಳು
ಕ.ಕ ಮತ್ತು ಇ.ನಿ.ಕಾ.ಕ ಮಂಡಳಿ